ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/184/ಕ.ಲೋಆ/2022-23 ದಿನಾಂಕ: 26.12.2023.

# ಸುತ್ತೋಲೆ

ವಿಷಯ: ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪರೀಕ್ಷೆ ನಡೆಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು, ರವರ ಪತ್ರ ಸಂಖ್ಯೆ:ಪಿಎಸ್‌ಸಿ 490 ಆರ್‌ಟಿಬಿ-4/2023-24/2140 ದಿನಾಂಕ:18.12.2023.

* * * * * *

ಕರ್ನಾಟಕ ಲೋಕಸೇವಾ ಆಯೋಗದ ವಿವಿಧ ಅಧಿಸೂಚನೆಗಳಲ್ಲಿ ಅಧಿಸೂಚಿಸಲಾದ ಗ್ರೂಪ್ ಸಿ ಹುದ್ದೆಗಳಿಗೆ ದಿನಾಂಕ:30.12.2023 ರಂದು ನಡೆಸಲಾಗುತ್ತಿರುವ ಸಹಕಾರ ಇಲಾಖೆಯ, ಸಹಕಾರ ಸಂಘಗಳ ನಿಬಂಧಕರ ಕಛೇರಿಯಲ್ಲಿನ ಸಹಕಾರ ಸಂಘಗಳ ನಿರೀಕ್ಷಕರ ಹುದ್ದೆಗಳಿಗೆ ಪರೀಕ್ಷೆಗಳನ್ನು ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲು ತೀರ್ಮಾನಿಸಿದ್ದು, ಪರೀಕ್ಷೆಗಳನ್ನು ನಡೆಸಲು ಸ್ಥಳಾವಕಾಶ ನೀಡುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಲಾಗಿರುತ್ತದೆ.

ತತ್ಸಂಬಂಧವಾಗಿ, ದಿನಾಂಕ:30.12.2023 ರಂದು ನಡೆಸಲಾಗುತ್ತಿರುವ ಮೇಲ್ಕಂಡ ಪರೀಕ್ಷೆಗೆ ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳಲ್ಲಿನ ಸರ್ಕಾರಿ / ಅನುದಾನಿತ ಪದವಿ ಕಾಲೇಜುಗಳ ಉಪನ್ಯಾಸಕರು / ಸಿಬ್ಬಂದಿಗಳು ನಿಯೋಜಿಸಿರುವ ಪರೀಕ್ಷಾ ಕಾರ್ಯಗಳಿಗೆ ಕಾಲೇಜಿನ ಕಟ್ಟಡ / ಕೊಠಡಿಗಳನ್ನು ಹಾಗೂ ಇತರೆ ಅಗತ್ಯ ಮೂಲಭೂತ ಸೌಕರ್ಯಗಳ ನೆರವಿನೊಂದಿಗೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಚ್ಚರವಹಿಸಿ ಪರೀಕ್ಷೆನ್ನು ಯಶಸ್ವಿಯಾಗಿ ನಡೆಸಲು ಸಹಕರಿಸುವಂತೆ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಅಡಕ: ಕಾಲೇಜುಗಳ ಪಟ್ಟಿ

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

1. ಸಂಬಂಧಿಸಿದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.